## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಮನಗರ ಜಿಲ್ಲೆ ಕನಕಪುರ ತಾಲ್ಲೂಕಿನ ಕೋಡಿಹಳ್ಳಿ ಮತ್ತು ಇತರೆ 298 ಜನವಸತಿಗಳಿಗೆ DBOT ಆಧಾರಿತ ಶುದ್ಧ ಹಾಗೂ ಶಾಶ್ವತ ಕುಡಿಯುವ ನೀರು ಸರಬರಾಜು ಯೋಜನೆಯ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂ:ಗ್ರಾಅಪ 82 ಗ್ರಾನೀಸ(5)14 ದಿನಾಂಕ:24.02.2016.
2. ದಿನಾಂಕ:09.11.2017ರಂದು ನಡೆದ ಟೆಂಡರ್ ಅಂಗೀಕರಿಸುವ ಪ್ರಾಧಿಕಾರ ಸಭೆಯ ನಡವಳಿಗಳು.
3. ಮುಖ್ಯ ಇಂಜಿನಿಯರ್, RDWSD ರವರ ಕಡತ ಸಂ:ಗ್ರಾಅಪ 06 ಗ್ರಾಕುನೀ&ನೈಇ 2017-18.

---

**ಪೀಠಿಕೆ:**

ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕಿನ ಕೋಡಿಹಳ್ಳಿ ಮತ್ತು ಇತರೆ 298 ಜನವಸತಿಗಳಿಗೆ DBOT ಆಧಾರಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ದಿನಾಂಕ:24.02.2016ರಂದು ರೂ.170.00ಕೋಟಿ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಮೂಲ ಅಂದಾಜು ಪಟ್ಟಿಯಲ್ಲಿ Staff quarters at head work, provision for DG at pump house of 500 KVA capacity, pump model study, sludge treatment unit, DG set, construction of OHTs, Staff quarters at IPS and re-chlorination system ಅಂಶಗಳನ್ನು ಒಳಗೊಂಡಿರುವುದಿಲ್ಲ. ಪ್ರಸ್ತುತ ಪ್ರತಿ ಗ್ರಾಮದಲ್ಲಿ ELSR ನಿರ್ಮಿಸಲು ಪರಿಗಣಿಸಲಾಗಿದೆ.

DBOT ಆಧಾರದ ಮೇಲೆ ಸದರಿ ಯೋಜನೆ ಕಾಮಗಾರಿಗೆ ಅತಿ ಕಡಿಮೆ ದರ ನಮೂದಿಸಿರುವ M/s. Megha Engineering and Infrastructures Ltd., Hyderabad ರವರ ನಮೂದಿತ ಟೆಂಡರ್ ಮೊತ್ತ ರೂ.210.80ಕೋಟಿಗಳಾಗಿದ್ದು, CSR ದರಕ್ಕೆ ಹೋಲಿಸಿದಾಗ ಶೇ.6.61ರಷ್ಟು ಹೆಚ್ಚಾಗಿದೆ. ಮೇಲೆ (2)ರಲ್ಲಿ ಓದಲಾದ ಟೆಂಡರ್ ಅಂಗೀಕರಿಸುವ ಪ್ರಾಧಿಕಾರ (TAA) ಸಭೆಯಲ್ಲಿ ಶೇ.6.61 ಟೆಂಡರ್ ಪ್ರೀಮಿಯಂ ಹೆಚ್ಚಾಗಿರುವ ಪ್ರಸ್ತಾವನೆಗೆ ಸಮಿತಿಯು ಅನುಮೋದಿಸಿತು.

ಪ್ರಸ್ತುತ ಮೂಲ ಅಂದಾಜು ಪಟ್ಟಿಯಲ್ಲಿ ಪರಿಗಣಿಸದಿದ್ದ ಅಗತ್ಯ ಐಟಂಗಳು, ಪ್ರತಿ ಗ್ರಾಮದಲ್ಲಿ ELSR ನಿರ್ಮಾಣದ ವೆಚ್ಚ ಹಾಗೂ ಗುತ್ತಿಗೆ ವಹಿಸಬೇಕಾದ ಮೊತ್ತ ಮತ್ತು 5 ವರ್ಷಗಳ O&M ಬಾಬ್ತು ಸೇರಿದಂತೆ ಒಟ್ಟಾರೆ ಎಲ್ಲಾ 299 ಜನವಸತಿಗಳಿಗೆ ಕುಡಿಯುವ ನೀರು ಸರಬರಾಜು ಮಾಡಲು ರೂ.216.00ಕೋಟಿಗಳಿಗೆ ಯೋಜನೆಯ ಅಂದಾಜು ಮೊತ್ತ ಪರಿಷ್ಕೃತವಾಗಿದೆ.

ಈ ಹಿನ್ನೆಲೆಯಲ್ಲಿ ಗುತ್ತಿಗೆದಾರರು M/s. Megha Engineering and Infrastructures Ltd., Hyderabad ರವರು ಕೋಡಿಹಳ್ಳಿ ಮತ್ತು ಇತರೆ 298 ಜನವಸತಿಗಳಿಗೆ DBOT ಆಧಾರಿತ ಯೋಜನಾ ಕಾಮಗಾರಿಯನ್ನು ರೂ.210.80ಕೋಟಿಗಳಿಗೆ ಅನುಷ್ಠಾನ ಮಾಡಲು ಒಪ್ಪಿದ್ದು, ಸದರಿ ಮೊತ್ತಕ್ಕೆ ಅನುಮೋದನೆ ನೀಡಲು ಮೇಲೆ ಓದಲಾದ (3)ರ ಕಡತದಲ್ಲಿ ಮುಖ್ಯ ಅಭಿಯಂತರರು, ಗ್ರಾಮೀಣ

MEGHA ENGINEERING & INFRASTRUCTURES LTD. meil

Executive Engineer
Rural Drinking Water & Sanitation Dept.
Ramanagara Division, Ramanagara.

ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರು ಕೋರಿರುತ್ತಾರೆ. ಗುತ್ತಿಗೆದಾರರ ನಮೂದಿತ ಮೊತ್ತವಾದ ರೂ.21080.00ಲಕ್ಷಗಳಲ್ಲಿ 6.61% ಟೆಂಡರ್ ಪ್ರೀಮಿಯಂನೊಂದಿಗೆ ಯೋಜನೆಯ ಪರಿಷ್ಕೃತ ಅಂದಾಜು ರೂ.21600.00ಲಕ್ಷಗಳಿಗೆ ಕೇಂದ್ರ ಪುರಸ್ಕೃತ NRDWP ಹಾಗೂ ರಾಜ್ಯ ವಲಯದಡಿ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 01 ಗ್ರಾನೀಸ(5)2018 ಬೆಂಗಳೂರು, ದಿನಾಂಕ:23.01.2018.**

ಪೀಠಿಕೆಯಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ, ರಾಮನಗರ ಜಿಲ್ಲೆ ಕನಕಪುರ ತಾಲ್ಲೂಕಿನ ಕೋಡಿಹಳ್ಳಿ ಮತ್ತು ಇತರೆ 298 ಜನವಸತಿಗಳಿಗೆ DBOT ಆಧಾರಿತ ಶುದ್ಧ ಹಾಗೂ ಶಾಶ್ವತ ಕುಡಿಯುವ ನೀರು ಪೂರೈಕೆ ವ್ಯವಸ್ಥೆ ಕಲ್ಪಿಸುವ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ **5 ವರ್ಷಗಳ O&M ವೆಚ್ಚ ಸೇರಿದಂತೆ ಪರಿಷ್ಕೃತ ಅಂದಾಜು ರೂ.21600.00ಲಕ್ಷ (ಇಪ್ಪತ್ತೊಂದು ಸಾವಿರದ ಆರು ನೂರ ಲಕ್ಷ ರೂಪಾಯಿಗಳು ಮಾತ್ರ)**ಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಹಾಗೂ ಈ ಯೋಜನೆಯನ್ನು **ಶೇ.6.61 ಟೆಂಡರ್ ಪ್ರೀಮಿಯಂನೊಂದಿಗೆ ರೂ.21080.00ಲಕ್ಷ (ಇಪ್ಪತ್ತೊಂದು ಸಾವಿರದ ಎಂಭತ್ತು ಲಕ್ಷ ರೂಪಾಯಿಗಳು ಮಾತ್ರ)**ಗಳ ಮೊತ್ತದಲ್ಲಿ ಕೇಂದ್ರ ಪುರಸ್ಕೃತ NRDWP ಹಾಗೂ ರಾಜ್ಯ ವಲಯದಡಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

a) ಈ ಅನುಮೋದಿತ ಕುಡಿಯುವ ನೀರಿನ ಯೋಜನೆಯ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

b) ಈ ಯೋಜನೆಯ **DBOT** ಟೆಂಡರ್‌ನ್ನು KTPP ಪಾರದರ್ಶಕ ನಿಯಮಗಳನ್ನು ಅನುಸರಿಸಿ ಅದರಂತೆ ಕ್ರಮವಹಿಸತಕ್ಕದ್ದು.

c) ಟೆಂಡರ್ ಅವಾರ್ಡ್ ಮಾಡುವ ಮೊದಲು ಅಗತ್ಯವಿರುವ ಅನುದಾನವನ್ನು ಲಭ್ಯತೆ ಮಾಡಿಕೊಂಡು ಕ್ರಿಯಾ ಯೋಜನೆಯಲ್ಲಿ ಅಳವಡಿಸಿದ ನಂತರ ನಿಯಮಾನುಸಾರ ಮುಂದಿನ ಕ್ರಮವಹಿಸುವುದು.

d) ಈ ಯೋಜನೆಯ ಅನುಷ್ಠಾನ ಮತ್ತು ಅನುದಾನ ವಿನಿಯೋಗದಲ್ಲಿ ಅನುಮೋದಿತ ಟೆಂಡರ್ ಮೊತ್ತ ಮೀರಿ ಹೆಚ್ಚಳವಾಗದಂತೆ ಅನುಷ್ಠಾನ ಅಧಿಕಾರಿಗಳು ನಿಗಾವಹಿಸಿ ಪ್ರಚಲಿತ ನಿಯಮಗಳಾನುಸಾರ ಅಗತ್ಯವಿರುವ ನಿಬಂಧನೆಗಳನ್ನು ಅಳವಡಿಸಿಕೊಂಡು ಸೂಕ್ತ ರೀತಿಯಲ್ಲಿ ಒಡಂಬಡಿಕೆ – ಕರಾರುಗಳನ್ನು ಮಾಡಿಕೊಳ್ಳತಕ್ಕದ್ದು.

e) ಯಶಸ್ವಿ ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ **5** ವರ್ಷಗಳ ಕಾಲ ಸದರಿ ಯೋಜನೆಯ ಸಂಪೂರ್ಣ ನಿರ್ವಹಣೆ ಹಾಗೂ ಕಾರ್ಯಾಚರಣೆ ಜವಾಬ್ದಾರಿಯನ್ನು (ವಿದ್ಯುತ್ ಶುಲ್ಕ ಹೊರತುಪಡಿಸಿ) ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

f) ಯೋಜನಾ ವ್ಯಾಪ್ತಿಯ ಜನವಸತಿಗಳಿಗೆ 70 LPCD ನೀರನ್ನು ಒದಗಿಸುವುದು. ಯಾವುದೇ ಕಾರಣಕ್ಕೂ ಅನುಮೋದಿತ ಯೋಜನಾ ಅಂದಾಜು ವೆಚ್ಚದಲ್ಲಿ ಹೆಚ್ಚಳವಾದಲ್ಲಿ ಗುತ್ತಿಗೆದಾರರೇ ಅಂತಹ ಹೆಚ್ಚಳ ಭರಿಸತಕ್ಕದ್ದು.

g) ಗುತ್ತಿಗೆದಾರರು ಸಿದ್ಧಪಡಿಸುವ ಡಿ.ಪಿ.ಆರ್‌ಗೆ **CE-RDWSD** ಹಂತದಲ್ಲಿರುವ **DBOT** ತಾಂತ್ರಿಕ ಸಮಿತಿ, ತಾಂತ್ರಿಕ ಸಿಂಧುತ್ವವನ್ನು ಪರಿಶೀಲಿಸಿ ದೃಢೀಕರಿಸಬೇಕು. ಹೀಗೆ ದೃಢೀಕರಿಸುವಾಗ ವಾಸ್ತವಿಕವಾಗಿ ಅಗತ್ಯವಿರುವ ಪ್ರಮಾಣದ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆಗೆ ಅಗತ್ಯವಿರುವ ಎಲ್ಲಾ ತಾಂತ್ರಿಕ ಅಂಶಗಳು ಮತ್ತು ಕಾಮಗಾರಿಗಳು ಪೂರಕವಾಗಿರುವುದನ್ನು ದೃಢಪಡಿಸಿಕೊಳ್ಳಬೇಕು.

MEGHA ENGINEERING & INFRASTRUCTURES LTD.

Executive Engineer
Rural Drinking Water & Sanitation Dept.
Ramanagara Division, Ramanagara.

h) ಈ ಯೋಜನೆಯ ಕಾಮಗಾರಿಯನ್ನು 27 ತಿಂಗಳ ಕಾಲಮಿತಿಯೊಳಗೆ ಅನುಷ್ಠಾನಗೊಳಿಸತಕ್ಕದ್ದು. ಯಾವುದೇ ವಿಳಂಬಕ್ಕೆ ಅವಕಾಶವೀಯಕೂಡದು ಯೋಜನೆಯ ಘಟಕದಲ್ಲಿನ ಸಾಮಗ್ರಿಗಳ ಬೆಲೆ ಹೆಚ್ಚಳಕ್ಕೆ ಅವಕಾಶವಿರುವುದಿಲ್ಲ. ಬಲ್ಕ್‌ವಾಟರ್ ಮೀಟರ್‌ಗಳನ್ನು ಎಲ್ಲಾ ಜನವಸತಿಗಳ OHT ಬಳಿ ಅಳವಡಿಸತಕ್ಕದ್ದು.

i) ಯೋಜನಾ ಅಂದಾಜು ಮೊತ್ತದ ಕನಿಷ್ಠ **10%**ನ್ನು ಯೋಜನೆ ಕಾರ್ಯಗತಗೊಳಿಸಿ ತೃಪ್ತಿಕರ **O&M** ವ್ಯವಸ್ಥೆ ನಿರೂಪಿಸುವ ಕಾರ್ಯಕ್ಷಮತೆ ಆಧರಿಸಿ ನಂತರ ಗುತ್ತಿಗೆದಾರರಿಗೆ ಪಾವತಿಸಬೇಕು.

j) ಈ ಯೋಜನೆಯ ಮುಖ್ಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ ನಂತರ, ಅವುಗಳ ಗುಣಮಟ್ಟ ಮತ್ತು ಕಾರ್ಯಕ್ಷಮತೆ ಮತ್ತು **PMC** ವರದಿ ಆಧರಿಸಿ ಅನುಮೋದಿತ **ToR** ಹಾಗೂ ಟೆಂಡರ್ ಕರಾರಿನಂತೆ ನಿಯಮಾನುಸಾರ ಬಿಲ್ ಪಾವತಿಸಲು ಅನುಷ್ಠಾನಾಧಿಕಾರಿಗಳು ಹಾಗೂ **CE-RDWSD** ಕ್ರಮವಹಿಸಬೇಕು. ಕಾಮಗಾರಿಯ ಕಾಲಕಾಲಿಕ ಪ್ರಗತಿ ಮತ್ತು ಗುಣಮಟ್ಟ ಪರಿಶೀಲಿಸಿ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ವರದಿ ಮಾಡತಕ್ಕದ್ದು.

k) ಈ ಯೋಜನೆಯ ವಿನ್ಯಾಸದ ಕಾರ್ಯಸಿಂಧುತ್ವ ಪರಿಶೀಲಿಸುವುದು, ಕಾಲಮಿತಿಯೊಳಗೆ ಯೋಜನೆ ಅನುಷ್ಠಾನಗೊಳಿಸುವುದು ಮತ್ತು ಯೋಜನೆಯ ಕಾಮಗಾರಿಗಳ ಗುಣಮಟ್ಟ ಪರಿವೀಕ್ಷಣೆ ಸಲುವಾಗಿ ಅಗತ್ಯವಿರುವ ಯೋಜನಾ ಉಸ್ತುವಾರಿ ಘಟಕವನ್ನು ಟೆಂಡರ್ ಮುಖೇನ ಗೊತ್ತುಪಡಿಸಿ, ಸರ್ಕಾರದ ಅನುಮೋದನೆ ಪಡೆಯಲು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಜರೂರಾಗಿ ಕ್ರಮವಹಿಸತಕ್ಕದ್ದು.

l) ಮೇಲ್ಕಂಡ ಅನುಮೋದಿತ ಮೊತ್ತ **DBOT** ತಾಂತ್ರಿಕ ಸಮಿತಿ ದೃಢೀಕರಿಸುವ ಯೋಜನೆಯ ಮುಖ್ಯ ಕಾಮಗಾರಿಗಳ ವಾಸ್ತವಿಕ ಅಂದಾಜು ಮೊತ್ತದ ನಿಬಂಧನೆಗೊಳಪಟ್ಟಿರುತ್ತದೆ. ಅಂತೆಯೇ, ಅನುಮೋದಿತ ಸಂಸ್ಥೆಯೊಡನೆ **MoU**/ಕರಾರು ಪತ್ರ ಮಾಡಿಕೊಳ್ಳುವ ಮೊದಲು ಗರಿಷ್ಠ ಮಿತವ್ಯಯ ಅಳವಡಿಸಿ, ಸರ್ಕಾರದ ಅನುಮತಿ ಪಡೆದು ಯೋಜನೆಯ ಅನುಷ್ಠಾನ ಕುರಿತು **CE/RDWSD** ಮುಂದಿನ ಕ್ರಮವಹಿಸತಕ್ಕದ್ದು.

3. ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 26 ವೆಚ್ಚ–6/2017 ದಿನಾಂಕ:17.1.2018ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ. ಕರಿಯಪ್ಪ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು– II – E&RSA-) ಕರ್ನಾಟಕ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು–1.
7. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು

MEGHA ENGINEERING & INFRASTRUCTURES LTD.

**Executive Engineer**
Rural Drinking Water & Sanitation Dept.
Ramanagara Division, Ramanagara.

8. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
9. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕಾವೇರಿಭವನ, ಬೆಂಗಳೂರು–09.
10. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ರಾಮನಗರ**.
11. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್, **ರಾಮನಗರ**.
12. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, **ಬೆಂಗಳೂರು**.
13. ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, **ರಾಮನಗರ**.
14. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
15. ಮುಖ್ಯ ಲೆಕ್ಕಾಧಿಕಾರಿಗಳು, RDWSD, ಕಾವೇರಿಭವನ, ಬೆಂಗಳೂರು–09.
16. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
17. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
18. ಆಯುಕ್ತರು, RDWSD ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ / ಆಂತರಿಕ ಆರ್ಥಿಕ ಸಲಹೆಗಾರರು ಇವರುಗಳ ಆಪ್ತ ಸಹಾಯಕರು.
19. ಉಪ ನಿರ್ದೇಶಕರು, Network Management Center (TNMC), ನಂ.49, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
20. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, ಃWSSB ಬ್ರ್ಯಾಂಚ್, ರಾಜದ್ಕೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
21. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
22. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
23. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
24. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
25. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿಗಳು.

MEGHA ENGINEERING & INFRASTRUCTURES LTD.
meil

**Executive Engineer**
Rural Drinking Water & Sanitation Dept.
Ramanagara Division, Ramanagara.